ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/8/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:08-10-2020.

**-:: ಸು ತ್ತೋಲೆ ::-**

**ವಿಷಯ:** 2020-21ನೇ ಸಾಲಿನಲ್ಲಿ ಪ್ರಥಮ ಡಿಪ್ಲೋಮಾ ಪ್ರವೇಶ ಸಂಬಂಧ ಭರ್ತಿ ಆಗದ ಸೀಟುಗಳನ್ನು ಆಫ್-ಲೈನ್ ಮೂಲಕ **ಸಾಮಾನ್ಯ ವರ್ಗದಡಿ ಸೀಟು ಹಂಚಿಕೆ ಮಾಡಲು ಅವಧಿ ವಿಸ್ತರಿಸುವ ಕುರಿತು.**

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/8/2020, ದಿನಾಂಕ: 04-08-2020.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:02-09-2020.
3. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:22-09-2020.

-000000-

2020-21ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರ ಸುತ್ತೋಲೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು 30-09-2020 ಎಂದು ನಿಗಧಿಪಡಿಸಿ, ದಿ:03-10-2020ರಂದು ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ರೋಸ್ಟರ್ ಅನುಗುಣವಾಗಿ ನಿಯಮಗಳನ್ನು ಪಾಲಿಸಿ ಆಯಾ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಹಂತದಲ್ಲಿಯೇ ತುಂಬಲು ಅನುಮತಿ ನೀಡಲಾಗಿತ್ತು.

ಆಫ್-ಲೈನ್ ಕೌನ್ಸಲಿಂಗ್ ಸೀಟು ಹಂಚಿಕೆ ಮುಗಿದ ನಂತರ ಭರ್ತಿ ಆಗದ ಉಳಿಕೆ ಸೀಟುಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ **ದಿನಾಂಕ:15-10-2020ರ ಒಳಗೆ ಪ್ರವೇಶಾತಿಯನ್ನು ನೀಡಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

***ಭರ್ತಿ ಆಗದ ಉಳಿಕೆ ಸೀಟುಗಳಿಗೆ ಮಾತ್ರ ಅನ್ವಯವಾಗುವಂತೆ (ಎಸ್.ಎನ್.ಕ್ಯೂ ಸೀಟು ಹೊರತುಪಡಿಸಿ) ಪ್ರವೇಶ ಬಯಸಿ ಮೊದಲು ಬಂದವರಿಗೆ ಮೊದಲ ಆಧ್ಯತೆ ನೀಡಿ ಆಯಾ ದಿನವೇ ಸಾಮಾನ್ಯ ವರ್ಗದಡಿ ಆಫ್-ಲೈನ್ ಮುಖಾಂತರ ಸೀಟು ಹಂಚಿಕೆ ಮಾಡಿ, ನಿಗಧಿತ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.***

ಮೇಲೆ ನಮೂದಿಸಿರುವಂತೆ ಇಂದೇ / ಕೂಡಲೇ ಕ್ರಮ ತೆಗೆದುಕೊಂಡು ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, **ದಿ:15-10-2020ರ** ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಆಫ್-ಲೈನ್ ಮುಖಾಂತರ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. **ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ.**

ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

ಗೆ,

*ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ – ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*

<u>ಪ್ರತಿ ಮಾಹಿತಿಗಾಗಿ:–</u>

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಇ.ಆರ್.ಎಸ್ ವಿಭಾಗಕ್ಕೆ – ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
8. ಎಸ್.ಟಿ.ಎಲ್ ಮತ್ತು ಡಿವಿಪಿ(2) ವಿಭಾಗಕ್ಕೆ.
9. ಕಛೇರಿ ಪ್ರತಿ.